ಈ ಸಮಸ್ಯೆಯನ್ನು ಬಗೆ ಹರಿಸಲು ಶೀಘ್ರದಲ್ಲಿಯೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಚಿವರ ಹಾಗೂ ನಗರಾಭಿವೃದ್ಧಿ ಇಲಾಖೆ ಸಚಿವರೊಂದಿಗೆ ಸಭೆಯನ್ನು ನಡೆಯಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಈ ವಿಷಯದ ಬಗ್ಗೆ ಬಹಳ ಸ್ಪಷ್ಟವಾಗಿ ಹೇಳಿದ್ದೇನೆ. ಈ ವಿಷಯದ ಬಗ್ಗೆ Urban Development ನವರು ಮತ್ತು ಪಂಚಾಯತ್‌ರಾಜ್ ಸಚಿವರು, ನಮ್ಮ ಇಲಾಖೆಯವರು ಮೂರು ಕೂಡಿ, ಏಕೆಂದರೆ ಹೈಕೋರ್ಟ್‌ನಿಂದ decision ಬಂದಿರುವುದರಿಂದ ಉಡುಪಿ ಮತ್ತು ಮಂಗಳೂರಿಗೆ ವಿಶೇಷವಾಗಿ ಏನಾದರೂ ಯೋಜನೆ ಮಾಡಿ, ಮತ್ತೆ ಹೈಕೋರ್ಟ್‌ನಲ್ಲಿ ನಮ್ಮ ಅಧಿಕಾರಿಗಳೊಂದಿಗೆ ಮಾತುಕತೆ ಮಾಡಿ ಅದನ್ನು ಬಗೆಹರಿಸುವಂತಹ ಪ್ರಯತ್ನ ಮಾಡುತ್ತೇವೆ.

ಅಧ್ಯಕ್ಷರು :– ಇದರ ಮಧ್ಯೆ ಸರ್ಕಾರ ಬೇಡ. ಹೈಕೋರ್ಟ್‌ನಲ್ಲಿಯೇ ತೀರ್ಮಾನ ಮಾಡಲಿ, ಸಾಕು ಬಿಡಿ.

ಶ್ರೀ ವಿ. ಸುನೀಲ್ ಕುಮಾರ್ :– ಈ ವಾರದಲ್ಲಿಯೇ ದಯಮಾಡಿ ಸಭೆಯನ್ನು ಕರೆಯಬೇಕು. ಎರಡನೆಯದಾಗಿ ಮೂರು ಇಲಾಖೆಯ ಸಭೆ ನಡೆಯಬೇಕಾದರೆ, ಆ ಎರಡೂ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಮತ್ತು sub-division ಅಧಿಕಾರಿಗಳನ್ನು ಕರೆಯಬೇಕು. ಆಗ ಇನ್ನಷ್ಟು ಮಾಹಿತಿಗಳು ಬರುತ್ತವೆ. ಆ ಎರಡೂ ಜನರನ್ನು ಸೇರಿಸಿಕೊಳ್ಳಬೇಕೆಂದು ವಿನಂತಿ.

ಶ್ರೀ ವೈ.ಎಸ್.ವಿ. ದತ್ತಾ :– ಮಾನ್ಯ ಅಧ್ಯಕ್ಷರೆ, ಗಮನ ಸೆಳೆಯುವ ಸೂಚನೆಯಲ್ಲಿ ಮಂತ್ರಿಗಳು ಉತ್ತರ ಕೊಟ್ಟರೆ ಕೇವಲ ಸಂಬಂಧಿಸಿದ ಸದಸ್ಯರಿಗೆ ಮಾತ್ರವಲ್ಲದೇ ಇಡೀ ಸದನದ ಎಲ್ಲಾ ಸದಸ್ಯರಿಗೂ ಉತ್ತರದ ಪ್ರತಿಗಳನ್ನು ಕೊಡಬೇಕು. ಆದರೆ ಯಾರೂ ಕೊಡುತ್ತಿಲ್ಲ. ಮೊದಲೆಲ್ಲಾ ಕೊಡುತ್ತಿದ್ದರು.

ಅಧ್ಯಕ್ಷರು :– ಕೊಡುವಂತೆ ಮಾಡೋಣ. ಮಾನ್ಯ ಬಿ.ಬಿ. ನಿಂಗಯ್ಯನವರು ಗಮನ ಸೆಳೆಯುವುದು.

5. **ವಿಷಯ :** ಮೂಡಿಗೆರೆ ತಾಲ್ಲೂಕು ಕೇಂದ್ರದಲ್ಲಿರುವ ಮಹಾತ್ಮಗಾಂಧಿ ಮೆಮೋರಿಯಲ್ ಸಾರ್ವಜನಿಕ ಆಸ್ಪತ್ರೆ ಕೇಂದ್ರದಲ್ಲಿ ವೈದ್ಯರುಗಳಿಲ್ಲದೇ ರೋಗಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ.

ಶ್ರೀ ಬಿ.ಬಿ. ನಿಂಗಯ್ಯ (ಮೂಡಿಗೆರೆ) :– ಮಾನ್ಯ ಅಧ್ಯಕ್ಷರೆ, ಮೂಡಿಗೆರೆ ತಾಲ್ಲೂಕು ಕೇಂದ್ರದಲ್ಲಿರುವ ಮಹಾತ್ಮಗಾಂಧಿ ಮೆಮೋರಿಯಲ್ ಸಾರ್ವಜನಿಕ ಆಸ್ಪತ್ರೆ ಕೇಂದ್ರದಲ್ಲಿ ವೈದ್ಯರು ಇಲ್ಲದೇ ರೋಗಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):– ಮಾನ್ಯ ಅಧ್ಯಕ್ಷರೆ, ಪ್ರಸ್ತುತ ಈ ಆಸ್ಪತ್ರೆಯಲ್ಲಿ 15 ತಜ್ಞ ವೈದ್ಯರ ಹುದ್ದೆ ಮಂಜೂರಾಗಿದ್ದು, 5 ಕಾರ್ಯನಿರತರಾಗಿದ್ದು, 10 ಹುದ್ದೆಗಳು ಖಾಲಿ ಇರುತ್ತದೆ. 2012–13ನೇ ಸಾಲಿನ ಕೌನ್ಸಿಲಿಂಗ್ ವರ್ಗಾವಣೆಯಲ್ಲಿ 3 ತಜ್ಞ ವೈದ್ಯರುಗಳು ವರ್ಗಾವಣೆಯಾಗಿರುತ್ತಾರೆ. ಖಾಲಿ ಆದ ಹುದ್ದೆಗಳಿಗೆ ಬೇರೆ ವೈದ್ಯರು ಈ ಸ್ಥಳಗಳಿಗೆ ಸ್ಥಳ ಆಯ್ಕೆ ಮಾಡಿಕೊಳ್ಳದಿದ್ದ ಕಾರಣ ಖಾಲಿಯಾದ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ.

ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ :

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಎಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2, ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ರೂ. 65,000 ಹಾಗೂ ರೂ. 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 5,000 ದಿಂದ ರೂ. 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ 118 ಅಲೋಪತಿ ಮತ್ತು 52 ಆಯುಷ್ ಹಾಗೂ 135 ಬಂಧ-ಪತ್ರ ಅನುಷ್ಠಾನಕೋಶದಿಂದ ನೇಮಕಗೊಂಡ ವೈದ್ಯರು ಸೇರಿದಂತೆ ಒಟ್ಟು 2290 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 296 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿವೆ. ದಿನಾಂಕ : 28-06-2013 ರಂದು ಒಟ್ಟು 296 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಹಾಗೂ 92 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಹಿರಿಯ ವೈದ್ಯಾಧಿಕಾರಿಗಳ ಎದುರು ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ. ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ.

7. ಆರೋಗ್ಯ ಇಲಾಖೆಯಲ್ಲಿ ಈ ಕೆಳಕಂಡ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಪ್ರಕ್ರಿಯೆ ಜಾರಿಯಲ್ಲಿದ್ದು ಈ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ. ಈ ಸಂದರ್ಭದಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಎಲ್ಲಾ ಸರ್ಕಾರಿ ಹುದ್ದೆಗಳನ್ನು

ಭರ್ತಿ ಮಾಡುವ ಪ್ರಕ್ರಿಯೆಗೆ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಿ ಆದೇಶವನ್ನು ಹೊರಡಿಸುವವರೆಗೆ ಸ್ಥಗಿತಗೊಳಿಸುವಂತೆ ತಡೆ ಆಜ್ಞೆ ನೀಡಲಾಗಿದೆ. ಈ ತಡೆ ಆಜ್ಞೆ ತೆರುವಾದ ಕೂಡಲೇ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡಲಾಗುವುದು.

ಶ್ರೀ ಬಿ.ಬಿ. ನಿಂಗಯ್ಯ :– ಅದು 100 ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆಯಾಗಿದೆ. ದಿನಕ್ಕೆ 200–300 ರೋಗಿಗಳು ಬಂದು ಹೋಗುತ್ತಿರುತ್ತಾರೆ. ಅಲ್ಲಿ 15 ವೈದ್ಯರುಗಳು ಇರಬೇಕಾಗಿತ್ತು. ಕೇವಲ 3–4 ಜನರು ಇದ್ದಾರೆ. ಎರಡು ಬಾರಿ ನನ್ನ ವಿರುದ್ಧ strike ಮಾಡಿದ್ದರು.

ಅಧ್ಯಕ್ಷರು :– ಈಗ ಪ್ರಶ್ನೆ ಇರುವುದು ಏನು ? ಅಲ್ಲಿ ಆದಷ್ಟು ಬೇಗನೆ ವೈದ್ಯರನ್ನು ಹಾಕಿ ಎಂದು, ಅಷ್ಟೆ ಹೇಳಿ.

ಶ್ರೀ ಬಿ.ಬಿ. ನಿಂಗಯ್ಯ :– ತಾವು ಕೊಟ್ಟಿರುವ ಉತ್ತರ general ಆಗಿದೆ. Specific ಆಗಿ ಮೂಡಿಗೆರೆಗೆ ಸಂಬಂಧಿಸಿದಂತೆ ತಮಗೆ ಪತ್ರವನ್ನು ಬರೆದಿದ್ದೇನೆ. ಕೇಳಿಕೊಂಡಿದ್ದೇನೆ, ಎಲ್ಲಾ ಮಾಡಿದ್ದೇನೆ. ಆದರೆ, ಏನು ಸಹಾಯವಾಗಿಲ್ಲ. ದಯವಿಟ್ಟು ತುರ್ತಾಗಿ ಏನಾದರೂ ಮಾಡಿ ಸಹಾಯ ಮಾಡಿ.

ಅಧ್ಯಕ್ಷರು :– ನಿಮಗೆ ಬೇಕಾಗಿರುವುದು ಡಾಕ್ಟರ್ಸ್ ಅಲ್ಲವೇ ? ಮಾನ್ಯ ಸಚಿವರೆ, ಡಾಕ್ಟರ್ಸ್ ಹಾಕಿಕೊಡುತ್ತೀರೋ ಇಲ್ಲವೋ ಹೇಳಿ.

ಶ್ರೀ ಯು.ಟಿ. ಖಾದರ್ :– ಮಾನ್ಯ ಅಧ್ಯಕ್ಷರೆ, ಮೂಡಿಗೆರೆ ತಾಲ್ಲೂಕು ಆಸ್ಪತ್ರೆಗೆ ಪ್ರಥಮ ಆದ್ಯತೆ ಮೇರೆಗೆ ವೈದ್ಯರುಗಳನ್ನು ನೇಮಿಸಲು ಕ್ರಮ ತೆಗೆದುಕೊಳ್ಳುತ್ತೇವೆ.

6. ವಿಷಯ : ಒಳಚರಂಡಿ ಯೋಜನೆಯನ್ನು ಕಾರ್ಯಗತಗೊಳಿಸುವ ಬಗ್ಗೆ.

ಶ್ರೀ ಸಿ.ಬಿ. ಸುರೇಶ್ ಬಾಬು (ಚಿಕ್ಕನಾಯಕನಹಳ್ಳಿ) :– ಮಾನ್ಯ ಅಧ್ಯಕ್ಷರೆ, ಚಿಕ್ಕನಾಯಕನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಮಾಡುವ ಉದ್ದೇಶಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ವಿನಯ ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) :– ಮಾನ್ಯ ಅಧ್ಯಕ್ಷರೆ, ಚಿಕ್ಕನಾಯಕನಹಳ್ಳಿ ಪಟ್ಟಣವು ತುಮಕೂರು ಜಿಲ್ಲೆಯ ಒಂದು ತಾಲ್ಲೂಕು ಕೇಂದ್ರವಾಗಿದ್ದು, ತುಮಕೂರು ನಗರದಿಂದ 64 ಕಿ.ಮೀ. ಮತ್ತು ಬೆಂಗಳೂರು ನಗರದಿಂದ 134 ಕಿ.ಮೀ.